1) ತೋಟಗಾರಿಕೆ ಬೆಳೆಗಳ ಸಂಶೋಧನೆ ಬಗ್ಗೆ ಕೇಂದ್ರೀಕೃತ ಗಮನ ಹರಿಸಲು ಸಾಧ್ಯವಾಗುವುದಿಲ್ಲ.

2) ಸದರಿ ಬೆಳೆಗಳಿಗೆ ಆಧ್ಯತೆ ಮೇರೆಗೆ ಅನುದಾನ ಒದಗಿಸಲು ಸಾಧ್ಯವಾಗುವುದಿಲ್ಲ.

3) ಪ್ರತ್ಯೇಕವಾಗಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾನಿಲಯ ಸ್ಥಾಪನೆಗೊಂಡಿರುವುದರಿಂದ ಆಡಳಿತಾತ್ಮಕವಾಗಿ ಕಾರ್ಯನಿರ್ವಹಿಸುವಲ್ಲಿ ಅನಾನುಕೂಲವಾಗುತ್ತದೆ.

ಭೂಚೇತನ ಮಾರ್ಗಸೂಚಿ

1000 (1109) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರವು ಜಾರಿಗೆ ತಂದಿರುವ ಭೂಚೇತನ ಕಾರ್ಯಕ್ರಮದ ಮಾರ್ಗಸೂಚಿಯ ವರದಿಯು ಸಿದ್ದವಿದೆಯೇ;

ಆ) ಈ ಯೋಜನೆಗಾಗಿ ಎಷ್ಟು ಜಿಲ್ಲೆಗಳ ಜಮೀನುಗಳನ್ನು ಒಳಪಡಿಸಲು ಉದ್ದೇಶಿಸಲಾಗಿದೆ; ರಾಜ್ಯಾದ್ಯಂತ ಈ ಕಾರ್ಯಕ್ರಮವನ್ನು ಎಂದು ಸಂಪೂರ್ಣವಾಗಿ ಅನುಷ್ಠಾನಗೊಳಿಸಲಾಗುವುದು?

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು) :

ಅ) ಸರ್ಕಾರವು ಜಾರಿಗೆ ತಂದಿರುವ ಭೂಚೇತನ ಕಾರ್ಯಕ್ರಮದ ಮಾರ್ಗಸೂಚಿಯ ವರದಿಯು ಸಿದ್ದವಿದೆ.

ಆ) ಈ ಯೋಜನೆಗಾಗಿ 24 ಜಿಲ್ಲೆಗಳ ಖುಷ್ಕಿ ಜಮೀನುಗಳನ್ನು ಒಳಪಡಿಸಲು ಉದ್ದೇಶಿಸಲಾಗಿದೆ. ರಾಜ್ಯಾದ್ಯಂತ ಈ ಕಾರ್ಯಕ್ರಮವನ್ನು 2012–13ಕ್ಕೆ ಸಂಪೂರ್ಣವಾಗಿ ಅನುಷ್ಠಾನಗೊಳಿಸಲಾಗುವುದು.

1002 (1111) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಾರ್ವಜನಿಕ ವಿತರಣೆ ವ್ಯವಸ್ಥೆಯಡಿಯಲ್ಲಿ "ಅಕ್ಕಿ ಸಂತೆ" ಗಳ ಮೂಲಕ ಎಷ್ಟು ಪ್ರಮಾಣದ ಅಕ್ಕಿಯನ್ನು ಯಾವ ದರದಲ್ಲಿ ವಿತರಿಸಲಾಗಿದೆ;

ಯಾವ್ಯಾವ ಸ್ಥಳಗಳಲ್ಲಿ ವಿತರಿಸಲಾಗಿದೆ;